# ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ವೈ.ಎ. ನಾರಾಯಣಸ್ವಾಮಿ ರವರು ನಿಯಮ 72ರ ಮೇರೆಗೆ ಗಮನ ಸೆಳೆದ ಸೂಚನೆಗೆ ಉತ್ತರ

**ವಿಷಯ:**

ಸರ್ಕಾರಿ/ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಿಬ್ಬಂದಿಗಳಿಗೆ ನೀಡಬೇಕಾಗಿರುವ ವೈದ್ಯಕೀಯ ವೆಚ್ಚದ ಬಾಕಿ ಮೊತ್ತವನ್ನು ಸರಿಯಾದ ಸಮಯಕ್ಕೆ ನೀಡದೆ ಇರುವುದರಿಂದ, ಸದರಿ ಸಿಬ್ಬಂದಿಗಳಿಗೆ ಆಗುತ್ತಿರುವ ತೊಂದರೆ ಬಗ್ಗೆ.

**ಉತ್ತರ:**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಡಿ ರಾಜ್ಯ ವಲಯದ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಅಧಿಕಾರಿಗಳ, ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಮತ್ತು ಸಿಬ್ಬಂದಿ ವರ್ಗದವರ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಉಪಶೀರ್ಷಿಕೆ:021 ಅಡಿಯಲ್ಲಿ ಪ್ರತ್ಯೇಕವಾಗಿ ಅನುದಾನ ಕಲ್ಪಿಸಲಾಗಿರುತ್ತದೆ. ಸದರಿ ಉಪಶೀರ್ಷಿಕೆ ಅಡಿಯಲ್ಲಿ ಅನುದಾನದ ಲಭ್ಯತೆಗೆ ಅನುಗುಣವಾಗಿ ಅಧಿಕಾರಿಗಳ, ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಮತ್ತು ಸಿಬ್ಬಂದಿಗಳ ವೈದ್ಯಕೀಯ ವೆಚ್ಚವನ್ನು ಭರಿಸಲಾಗುತ್ತಿದೆ.

ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಪ್ರತ್ಯೇಕವಾಗಿ ಉಪಶೀರ್ಷಿಕೆಯನ್ನು ಅಥವಾ ಅನುದಾನವನ್ನು ಒದಗಿಸಿರುವುದಿಲ್ಲ, ಬದಲಿಗೆ ಎಲ್ಲಾ ಇಲಾಖೆಗಳನ್ನು ಒಗ್ಗೂಡಿಸಿ ಜಿಲ್ಲಾ ವಲಯದಲ್ಲಿ ಲೆಕ್ಕ ಶೀಷಿಕೆ:2515–00–101–0–26–021 ಅಡಿಯಲ್ಲಿ ಮತ್ತು ತಾಲ್ಲೂಕು ವಲಯದಲ್ಲಿ ಲೆಕ್ಕ ಶೀಷಿಕೆ:2515–00–101–0–26–021 ಅಡಿಯಲ್ಲಿ ಅನುದಾನವನ್ನು ಆರ್ಥಿಕ ಇಲಾಖೆಯಿಂದ ನೇರವಾಗಿ ಸಂಬಂಧಿಸಿದ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಬಿಡುಗಡೆಗೊಳಿಸಲಾಗುತ್ತಿದೆ.

ಮುಂದುವರೆದು, ಜಿಲ್ಲಾ ಮತ್ತು ತಾಲ್ಲೂಕು ವಲಯಗಳಲ್ಲಿ ಇತರೆ ಇಲಾಖೆಗಳಿಗೆ ಹೋಲಿಸಿದಾಗ ಶಿಕ್ಷಣ ಇಲಾಖೆಯ ಸಿಬ್ಬಂದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಬೇಡಿಕೆ ಅನುಗುಣವಾಗಿ ಅನುದಾನ ಕೊರತೆಯಾಗುವ ಸಾಧ್ಯತೆಯಿದ್ದು, ಅನುದಾನದ ಲಭ್ಯತೆಗೆ ಅನುಗುಣವಾಗಿ ವೈದ್ಯಕೀಯ ವೆಚ್ಚಗಳನ್ನು ಮರುಪಾವತಿಸಲಾಗುತ್ತಿದೆ.

ಅನುದಾನಿತ ಸಂಸ್ಥೆಗಳಿಗೆ 1963ರ ಕರ್ನಾಟಕ ಸರ್ಕಾರಿ (ವೈದ್ಯಕೀಯ ಹಾಜರಾತಿ) ನಿಯಮಗಳು ಅನ್ವಯವಾಗದಿರುವುದರಿಂದ, ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ವೈದ್ಯಕೀಯ ವೆಚ್ಚ ಮರುಪಾವತಿಗೆ ಅವಕಾಶವಿರುವುದಿಲ್ಲ.

ಇಪಿ 48 ಯೋಯೋಕ 2022

(ಬಿ.ಸಿ. ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ

ಸಕಾಲ ಸಚಿವರು